**Bangalore**
**Regional News**
**14.03.2025 / 14.30 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ರಾಜ್ಯದಲ್ಲಿ ವಿಶ್ವವಿದ್ಯಾಲಯಗಳನ್ನು ಮುಚ್ಚುವ ಬಗ್ಗೆ ತೀರ್ಮಾನವಾಗಿಲ್ಲ - ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ

೨. ಗ್ಯಾರಂಟಿ ಯೋಜನೆಗಳಿಗೆ ಪರಿಶಿಷ್ಟರ ಹಣ ಬಳಸಿಲ್ಲ - ಸಚಿವ ಎಚ್.ಸಿ. ಮಹದೇವಪ್ಪ

೩. ಕೇಂದ್ರ, ಒಣ ಮೆಣಸಿನಕಾಯಿ ಖರೀದಿಸುವಂತೆ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಪತ್ರ

೪. ನೆದರ್‌ಲ್ಯಾಂಡ್‌ನ ರಾಯಭಾರಿ ಭೇಟಿ ಮಾಡಿದ ಸಚಿವ ಎಂ.ಬಿ. ಪಾಟೀಲ್ - ಬಂಡವಾಳ ಹೂಡಿಕೆ ಕುರಿತಂತೆ ಚರ್ಚೆ

೫. ರಾಜ್ಯದ ವಿವಿಧೆಡೆ ಹೋಳಿ ಹಬ್ಬದ ಸಂಭ್ರಮ; ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಗಣ್ಯರಿಂದ ಶುಭಾಶಯ

**<><*<><>*><>**

ರಾಜ್ಯದ ಏಳು ವಿಶ್ವ ವಿದ್ಯಾಲಯಗಳನ್ನು ಮುಚ್ಚುವ ಬಗ್ಗೆ ಇನ್ನೂ ತೀರ್ಮಾನ ಆಗಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ವಿಧಾನಸಭೆಯಲ್ಲಿ ಬಿಜೆಪಿ ಸದಸ್ಯ ಡಾ. ಸಿ.ಎನ್. ಅಶ್ವತ್ಥ ನಾರಾಯಣ ನಿಲುವಳಿ ಸೂಚನೆಯಡಿ ವಿಷಯ ಪ್ರಸ್ತಾಪಿಸಿ, ರಾಜ್ಯದ ವಿಶ್ವವಿದ್ಯಾಲಯಗಳನ್ನು ಮುಚ್ಚುವ ಸ್ಥಿತಿ ನಿರ್ಮಾಣವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ, ಸಂಪುಟ ಉಪ ಸಮಿತಿ ವರದಿಯೇ ಇನ್ನೂ ಬಂದಿಲ್ಲ. ಉಪ ಸಮಿತಿ ವರದಿ ಬರುವ ಮೊದಲೇ ಬಿಜೆಪಿಗೆ ಆತಂಕ ಏಕೆ ಎಂದು ಪ್ರಶ್ನಿಸಿದರು. ಉಪ ಮುಖ್ಯಮಂತ್ರಿ ಅವರ ಅಧ್ಯಕ್ಷತೆಯಲ್ಲಿ ಪರಿಶೀಲನೆಗೆ ಉಪ ಸಮಿತಿ ರಚಿಸಲಾಗಿದೆ. ಉಪ ಸಮಿತಿ ವರದಿ ನೀಡುತ್ತಿದ್ದಂತೆ ಅದನ್ನು ಸಂಪುಟದಲ್ಲಿ ಚರ್ಚಿಸಿ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಪ್ರತಿಪಕ್ಷ ನಾಯಕ ಆರ್. ಅಶೋಕ ಮಾತಾನಾಡಿ, ಉಪಮುಖ್ಯಮಂತ್ರಿ ಈಗಾಗಲೇ ವಿಶ್ವವಿದ್ಯಾಲಯಗಳನ್ನು ಮುಚ್ಚುವುದಾಗಿ ಹೇಳಿಕೆ ನೀಡಿದ್ದು, ಇದರಿಂದ ಆತಂಕವಾಗಿದೆ ಎಂದು ಹೇಳಿದರು. ಈ ವೇಳೆ

ಮಧ್ಯಪ್ರವೇಶಿಸಿದ ಸಭಾಧ್ಯಕ್ಷ ಯು.ಟಿ. ಖಾದರ್, ಈ ವಿಷಯವನ್ನು ಮುಂದಿನವಾರ ನಿಯಮ ೬೯ರಡಿ ಚರ್ಚೆಗೆ ಅವಕಾಶ ಕಲ್ಪಿಸುವುದಾಗಿ ತಿಳಿಸಿದರು.

<><*<><>*><>

ಯುಡಿಐಡಿ ಕಾರ್ಡ್ ಹೊಂದಿರುವ ವಿಶೇಷಚೇತನರ ಆರೋಗ್ಯ ವಿಮಾ ಮಿತಿಯನ್ನು ಒಂದು ಲಕ್ಷದಿಂದ ೫ ಲಕ್ಷಕ್ಕೆ ಹೆಚ್ಚಿಸಲು ಪ್ರಯತ್ನಿಸಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿಧಾನಪರಿಷತ್‌ನಲ್ಲಿ ಭರವಸೆ ನೀಡಿದ್ದಾರೆ. ಎಸ್‌ಸಿಎಸ್‌ಪಿ/ ಟಿ ಎಸ್ ಪಿ ಹಣ ಬೇರೆ ಯೋಜನೆಗಳಿಗೆ ಬಳಸಲು ಸಾಧ್ಯವಿಲ್ಲ ಎಂದು ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ. ಮಹದೇವಪ್ಪ ಮೇಲ್ಮನೆಯಲ್ಲಿ ಸ್ಪಷ್ಟಪಡಿಸಿದ್ದಾರೆ. ಸದಸ್ಯರಾದ ಹೇಮಲತಾ ನಾಯಕ್ ಮತ್ತು ಶರವಣ ಪಿ.ಎ. ಎಸ್‌ಸಿಎಸ್‌ಪಿ/ ಟಿ ಎಸ್ ಪಿ ಹಣ ದುರ್ಬಳಕೆಯಾಗುತ್ತಿದೆ ಎಂದು ಆರೋಪಿಸಿದರು. ಇದಕ್ಕೆ ಉತ್ತರ ನೀಡಿದ ಸಚಿವ ಮಹದೇವಪ್ಪ, ಈ ಹಣವನ್ನು ಬದ್ಧತೆಯಿಂದ ಬಳಕೆ ಮಾಡಲಾಗುತ್ತಿದೆ ಎಂದು ಸದನಕ್ಕೆ ತಿಳಿಸಿದರು. ಸಚಿವರ ಉತ್ತರಕ್ಕೆ ತೃಪ್ತರಾಗದ ಪ್ರತಿಪಕ್ಷ ಸದಸ್ಯರು ಗ್ಯಾರಂಟಿ ಯೋಜನೆಗಳಿಗೆ ಪರಿಶಿಷ್ಟರ ಹಣ ದುರ್ಬಳಕೆ ಮಾಡಬೇಡಿ ಎಂದು ಸದನದಲ್ಲಿ ಗದ್ದಲ ಉಂಟುಮಾಡಿದರು. ಇದಕ್ಕೆ ಆಡಳಿತ ಪಕ್ಷದ ಸದಸ್ಯರು ಆಕ್ಷೇಪ ವ್ಯಕ್ತಪಡಿಸಿದರು. ಈ ಹಿನ್ನೆಲೆಯಲ್ಲಿ ಗದ್ದಲ ಉಂಟಾಗಿದ್ದರಿಂದ ಸದನವನ್ನು ಸಭಾಪತಿ ಹತ್ತು ನಿಮಿಷಗಳ ಕಾಲ ಮುಂದೂಡಿದರು.

<><*<><>*><>

ರಾಜ್ಯದಲ್ಲಿ ಒಣ ಮೆಣಸಿನಕಾಯಿ ಬೆಲೆ ಕುಸಿತ ಉಂಟಾಗಿದ್ದು, ರೈತರು ಸಂಕಷ್ಟಕ್ಕೀಡಾಗಿದ್ದಾರೆ. ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಒಣ ಮೆಣಸಿನಕಾಯಿ ಖರೀದಿಗೆ ಕ್ರಮ ಕೈಗೊಳ್ಳಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಮನವಿ ಮಾಡಿದ್ದಾರೆ. ಈ ಕುರಿತು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹ್ವಾಣ್ ಹಾಗೂ ವಾಣಿಜ್ಯ ಮತ್ತು ಕೈಗಾರಿಕೆ ಸಚಿವ ಪಿಯೂಷ್ ಗೋಯಲ್ ಅವರಿಗೆ ಪ್ರತ್ಯೇಕವಾಗಿ ಪತ್ರ ಬರೆದಿದ್ದಾರೆ. ದೇಶದಲ್ಲಿ ಕರ್ನಾಟಕ, ಆಂಧ್ರಪ್ರದೇಶ, ತೆಲಂಗಾಣ ರಾಜ್ಯಗಳು ಮೆಣಸಿನಕಾಯಿ ಬೆಳೆಯುವ ರಾಜ್ಯಗಳಾಗಿವೆ. ಮೆಣಸಿನಕಾಯಿ ಇಡೀ ದೇಶದಲ್ಲಿ ಎಲ್ಲರೂ ಉಪಯೋಗಿಸುವ ಪದಾರ್ಥವಾಗಿದ್ದು, ವಿದೇಶಗಳಿಗೂ ದೊಡ್ಡ ಪ್ರಮಾಣದಲ್ಲಿ ರಫ್ತು ಮಾಡಲಾಗುತ್ತದೆ. ಮೆಣಸಿನಕಾಯಿ ಬೆಳೆ ಅತ್ಯಂತ ಸೂಕ್ಷ್ಮ ಬೆಳೆಯಾಗಿದ್ದು ಅದನ್ನು ಕೀಟಗಳ ಹಾವಳಿಯಿಂದ ಕಾಪಾಡಿಕೊಂಡು ರಕ್ಷಣೆ ಮಾಡುವುದು ಅತ್ಯಂತ ಸವಾಲಿನ ಕೆಲಸವಾಗಿದೆ ಎಂದು ತಿಳಿಸಿದ್ದಾರೆ. ಕೇಂದ್ರ ಸರ್ಕಾರದ ಯೋಜನೆಯಡಿ

ಕರ್ನಾಟಕದ ರೈತರೂ ಬೆಳೆದ ಮೆಣಸಿನಕಾಯಿಯನ್ನೂ ಖರೀದಿಸಬೇಕೆಂದು ಅವರು ಪತ್ರದಲ್ಲಿ ಮನವಿ ಮಾಡಿದ್ದಾರೆ.

<><*<><>*><>

ಭಾರತ ಸರ್ಕಾರದ ಆಡಳಿತ ಸುಧಾರಣೆ ಮತ್ತು ಸಾರ್ವಜನಿಕ ಕುಂದುಕೊರತೆಗಳ ಇಲಾಖೆ ನೀಡುವ ೨೦೨೪ನೇ ಸಾಲಿನ ಇ-ಗವರ್ನೆನ್ಸ್ ರಾಷ್ಟ್ರೀಯ ಪ್ರಶಸ್ತಿ, ಕರ್ನಾಟಕ ಸರ್ಕಾರದ ರಿಮೋಟ್ ಸೆನ್ಸಿಂಗ್ ಅಳವಡಿಕೆ ಕೇಂದ್ರದ ಕರ್ನಾಟಕ ಭೌಗೋಳಿಕ ಮಾಹಿತಿ ವ್ಯವಸ್ಥೆ - ಜಿಐಎಸ್‌ಗೆ ಲಭಿಸಿದೆ. ಪ್ರಶಸ್ತಿಯು ಚಿನ್ನದ ಪದಕವನ್ನು ಒಳಗೊಂಡಿದೆ. ಈ ಕುರಿತಂತೆ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಕರ್ನಾಟಕ ಪಾರದರ್ಶಕ, ಜನಸ್ನೇಹಿ ಆಡಳಿತಕ್ಕೆ ಇಡೀ ದೇಶಕ್ಕೆ ಮಾದರಿ ರಾಜ್ಯವಾಗಿದೆ. ಈ ಪ್ರಶಸ್ತಿಯು ಜನಪರ ಕಾರ್ಯದ ಉತ್ಸಾಹವನ್ನು ನೂರ್ಮಡಿಗೊಳಿಸಿದೆ ಎಂದು ತಿಳಿಸಿದ್ದಾರೆ.

<><*<><>*><>

ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಅವರನ್ನು- ನೆದರ್ಲೆಂಡ್ಸ್ ರಾಯಭಾರಿ ಇವೋಟ್ ಡಿ ವಿಟ್ಸರ್ವ್ಸ್ ಇಂದು ಭೇಟಿಯಾಗಿ ಬಂಡವಾಳ ಹೂಡಿಕೆ ಸಂಬಂಧ ಚರ್ಚೆ ನಡೆಸಿದರು. ಈ ವೇಳೆ ಇವೋಟ್ ಡಿ ವಿಟ್ಸರ್ವ್ಸ್, ರಾಜ್ಯದ ವಿವಿಧ ಕೈಗಾರಿಕಾ ಮತ್ತು ಸಂಶೋಧನೆ ವಲಯಗಳಲ್ಲಿ ನೆದರ್‌ಲ್ಯಾಂಡ್ಸ್‌ನ ವಿವಿಧ ಕಂಪನಿಗಳು ಬಂಡವಾಳ ಹೂಡಿಕೆಗೆ ಆಸಕ್ತಿ ಹೊಂದಿವೆ ಎಂದು ಹೇಳಿದರು.  ಎಂ.ಬಿ.ಪಾಟೀಲ್ ಮಾತನಾಡಿ, ನೆದರ್ಲೆಂಡ್ಸ್ ಕಂಪನಿಗಳು ಭಾರತದಲ್ಲಿ ಮಾಡಿರುವ ಹೂಡಿಕೆಯಲ್ಲಿ ಶೇಕಡ ೯ರಷ್ಟು ರಾಜ್ಯಕ್ಕೆ ಬಂಡವಾಳ ಹರಿದುಬಂದಿದೆ.  ಫಿಲಿಪ್ಸ್ ಕಂಪನಿಯು ಯಲಹಂಕದ ನೂತನ ಕ್ಯಾಂಪಸ್ಸಿಗೆ ೫೦ ಮಿಲಿಯನ್ ಯೂರೋ ಬಂಡವಾಳ ಹೂಡಿದೆ ಎಂದು ತಿಳಿಸಿದರು.

<><*<><>*><>

ರಾಜ್ಯದ ವಿವಿಧೆಡೆ ಇಂದು ಸಂಭ್ರಮದಿಂದ ಹೋಳಿ ಹಬ್ಬ ಆಚರಿಸಲಾಗುತ್ತಿದೆ. ಮಹಿಳೆಯರು, ಮಕ್ಕಳಾದಿಯಾಗಿ ಪರಸ್ಪರ ಬಣ್ಣ ಎರಚಿ, ಹೋಳಿ ಆಚರಿಸುತ್ತಿದ್ದಾರೆ.  ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಹಲವು ಗಣ್ಯರು ನಾಡಿನ ಸಮಸ್ತ ಜನತೆಗೆ ಶುಭಾಶಯ ಕೋರಿದ್ದಾರೆ. ಬೆಳಗಾವಿ ನಗರ ಸೇರಿದಂತೆ ಜಿಲ್ಲೆಯಾದ್ಯಂತ ಹೋಳಿ ಹಬ್ಬವನ್ನು ಸಂಭ್ರಮದಿಂದ ಆಚರಿಸಲಾಗುತ್ತಿದೆ. ಯುವಕ, ಯುವತಿಯರು, ಮಹಿಳೆಯರು, ಮಕ್ಕಳು ಬಣ್ಣದಾಟ ಆಡುವ ಮೂಲಕ ಸಂಭ್ರಮಿಸಿದರು. ಚಿತ್ರದುರ್ಗದ ವಿವಿಧ ಬೀದಿಗಳಲ್ಲಿ ಇಂದು ಮಡಕೆ ಒಡೆಯುವ ಕಾರ್ಯಕ್ರಮ ಆಯೋಜಿಸಲಾಗಿದೆ.

ಚಿತ್ರದುರ್ಗ ಜಿಲ್ಲೆಯ ಇತ್ರೆ ತಾಲೂಕಿನಲ್ಲೂ ಸಂಭ್ರಮದಿಂದ ಹೋಳಿ ಹಬ್ಬವನ್ನು ಆಚರಿಸಲಾಯಿತು. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಇಂದು ಬಣ್ಣದ ಹಬ್ಬ ಹೋಳಿಯನ್ನು ಸಡಗರ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಹೋಳಿ ಹಬ್ಬದ ಅಂಗವಾಗಿ ಬಣ್ಣ ಎರಚಿಕೊಂಡು ಸಂಭ್ರಮಿಸುತ್ತಾ ಹೋಳಿ ಹಬ್ಬದ ಶುಭಾಶಯಗಳನ್ನು ವಿನಿಮಯ ಮಾಡಿಕೊಳ್ಳುತ್ತಿದ್ದ ದೃಶ್ಯ ಸಾಮಾನ್ಯವಾಗಿತ್ತು. ಬಾಗಲಕೋಟೆಯಲ್ಲಿ ಶಿವರಾತ್ರಿ ಅಮವಾಸ್ಯೆ ಮರುದಿನದಿಂದ ಶುರುವಾಗುವ ಹೋಳಿ ಸಂಭ್ರಮ ಕಾಮದಹನ ಮಾಡಿದ ಐದನೇ ದಿನಕ್ಕೆ ಕೊನೆಗೊಳ್ಳುತ್ತದೆ. ಹಳೆಯ ಬಾಗಲಕೋಟೆಯ ಕಿಲ್ಲಾ, ವೆಂಕಟಪೇಟೆ, ಹೊಸಪೇಟೆ, ಜೈನ್‌ಪೇಟೆ, ಹಳೆಪೇಟೆಗಳಲ್ಲಿ ಬಣ್ಣದಾಟ ಸಂಭ್ರಮದಿಂದ ನಡೆಯಿತು

ಈ ಕುರಿತು ಒಂದು ವರದಿ

****ಧ್ವನಿ ***ಪರಶುರಾಮ್ ಪೇಟಕರ್.

ದಾವಣಗೆರೆ ಜಿಲ್ಲೆಯಾದ್ಯಂತ ಜನರು ಹೋಳಿ ಹಬ್ಬ ಆಚರಿಸಿ ಬಣ್ಣದಲ್ಲಿ ಮಿಂದೆದ್ದರು. ನಗರದ ರಾಂ ಅಂಡ್ ಕೋ ವೃತ್ತದಲ್ಲಿ ಸಾವಿರಾರು ವಿದ್ಯಾರ್ಥಿಗಳು, ಯುವಕ- ಯುವತಿಯರು ಸಾಂಪ್ರದಾಯಿಕ ಮಡಿಕೆ ಒಡೆಯುವ ಸ್ಪರ್ಧೆಯಲ್ಲಿ ಭಾಗವಹಿಸಿ ಹಬ್ಬಕ್ಕೆ ಮತ್ತ? ರಂಗು ತಂದರು. ಈ ಮಧ್ಯೆ ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶವಾಗದಂತೆ ಜಿಲ್ಲಾ ಪೊಲೀಸ್ ಇಲಾಖೆ ನಗರದ ಸೂಕ್ಷ್ಮ ಪ್ರದೇಶಗಳಲ್ಲಿ ಬಿಗಿ ಬಂದೋಬಸ್ತ್ ಕೈಗೊಂಡಿದೆ. ಮುನ್ನೆಚ್ಚರಿಕಾ ಕ್ರಮವಾಗಿ ಡ್ರೋಣ್ ಕ್ಯಾಮರಾ ಮೂಲಕ ನಗರದಲ್ಲಿ ಕಣ್ಗಾವಲು ಇರಿಸಲಾಗಿದೆ.

<><*<><>*><>

ಪೋಕ್ಸೊ ಪ್ರಕರಣದಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರಿಗೆ ವಿಶೇಷ ನ್ಯಾಯಾಲಯದ ಖುದ್ದು ಹಾಜರಾತಿ ಆದೇಶಕ್ಕೆ ಉಚ್ಚ ನ್ಯಾಯಾಲಯ ತಡೆ ನೀಡಿದೆ. ವಿಶೇಷ ನ್ಯಾಯಾಲಯದ ಸಮನ್ಸ್ ರದ್ದು ಮಾಡುವಂತೆ ಕೋರಿ ಯಡಿಯೂರಪ್ಪ ಹೈಕೋರ್ಟ್ ಮೊರೆ ಹೋಗಿದ್ದರು. ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಪ್ರದೀಪ್ ಸಿಂಗ್ ಎರೂರು ಅವರಿದ್ದ ಏಕಸದಸ್ಯ ಪೀಠ ಸಮನ್ಸ್ ಆದೇಶಕ್ಕೆ ತಡೆ ನೀಡಿದೆ. ಯಡಿಯೂರಪ್ಪ ಪರ ಹಿರಿಯ ವಕೀಲ ಸಿ.ವಿ. ನಾಗೇಶ್ ವಾದ ಮಂಡಿಸಿದರು.

<><*<><>*><>

ಹಾಸನ ನಗರದ ಎಪಿಎಂಸಿ ಮಾರುಕಟ್ಟೆಗೆ ಇಂದು ಸಂಸದ ಶ್ರೇಯಸ್ ಪಟೇಲ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ವರ್ತಕರ ಅಹವಾಲುಗಳನ್ನು ಸ್ವೀಕರಿಸಿದ ಅವರು, ಅಧಿಕಾರಿಗಳಿಂದ ಮಾಹಿತಿ ಪಡೆದು ಸಮಸ್ಯೆಗಳನ್ನು ಶೀಘ್ರವಾಗಿ ಬಗೆಹರಿಸುವಂತೆ ಸೂಚನೆ ನೀಡಿದರು. ಬಳಿಕ ಮಾತನಾಡಿದ ಶ್ರೇಯಸ್ ಪಟೇಲ್ ಎಪಿಎಂಸಿ ಮಾರುಕಟ್ಟೆಯಲ್ಲಿ ಜಾಗದ ಸಮಸ್ಯೆ ಹಾಗೂ ಮಳಿಗೆಗಳ ಸಮಸ್ಯೆ ಸೇರಿದಂತೆ ಹಲವು ಸಮಸ್ಯೆಗಳ ಬಗ್ಗೆ ವರ್ತಕರು ಹೇಳಿಕೊಂಡಿದ್ದಾರೆ, ಶೀಘ್ರವಾಗಿ ಈ ಬಗ್ಗೆ ಸಭೆ ನಡೆಸಿ ಸಮಸ್ಯೆಗಳನ್ನು ಬಗೆಹರಿಸುವ ನಿಟ್ಟಿನಲ್ಲಿ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

**<><*<><>*><>**

**<u>ಸಂಕ್ಷಿಪ್ತ ಸುದ್ದಿ ...</u>**

೧. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಶ್ರೀ ಯೋಗಿನಾರೇಯಣ ಯತೀಂದ್ರರ ಜಯಂತಿ ಆಚರಿಸಲಾಯಿತು.

೨. ಮಂಡ್ಯ ಜಿಲ್ಲೆಯ ಎಲ್ಲಾ ಶಾಲಾ ಕಾಲೇಜುಗಳನ್ನು ತಂಬಾಕುಮುಕ್ತ ವಲಯವಾಗಿಸಿ ದೃಢೀಕರಣ ಪತ್ರ ನೀಡುವ ಗುರಿ ಹೊಂದಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**